ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೨೦

# ಕರ್ನಾಟಕ ವಿಧಾನ ಪರಿಷತ್ತು

## ನೂರ ಇಪ್ಪತ್ತೈದನೆಯ ಅಧಿವೇಶನ

**ಶುಕ್ರವಾರ, ದಿನಾಂಕ: ೧೮ನೇ ಜುಲೈ ೨೦೧೪**

---

**ಸಮೂಹ – V**

೧. ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

೩. ವಸತಿ ಸಚಿವರು

೪. ಅಬಕಾರಿ ಸಚಿವರು

೫. ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು

೬. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು

೭. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು

---

## ಮಹಾತ್ಮಾಗಾಂಧಿ ಉದ್ಯೋಗ ಖಾತ್ರಿ ಯೋಜನೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೨೮೬ (೧೫೪೯) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಯೋಜನೆ ಮಾನದಂಡ ಹಾಗೂ ಇದರ ಉಪಯೋಗದ ಬಗ್ಗೆ ಮಾಹಿತಿ ನೀಡುವುದು ;

(ಆ) ಪ್ರತಿ ಗ್ರಾಮ ಪಂಚಾಯಿತಿಗೆ ವರ್ಷಕ್ಕೆ ನೀಡುವ ಅನುದಾನವೆಷ್ಟು ;

(ಇ) ಸಿಮೆಂಟ್ ಕಾಮಗಾರಿ ಮಾಡಲು ಅವಕಾಶ ಕಲ್ಪಿಸದಿರಲು ಕಾರಣವೇನು ;

(ಈ) ಹಾಗಿದ್ದಲ್ಲಿ, ಶಾಸಕರ ನಿಧಿ, ಸಂಸದರ ನಿಧಿ ಜೊತೆಗೂಡಿ ಗ್ರಾಮ ಪಂಚಾಯ್ತಿಯ ಸ್ಥಿರವಾದ ಕೆಲಸ ಮಾಡಲು ಅವಕಾಶ ಮಾಡಿಕೊಡಲಾಗುವುದೆ ; ಮ್ಯಾಚಿಂಗ್ ಗ್ರಾಂಟ್ ಎಷ್ಟು ;

(ಉ) ಈ ರೀತಿ ಮಾಡಲು ಅವಕಾಶ ಮಾಡಿಕೊಟ್ಟರೆ ಸರ್ಕಾರಕ್ಕೆ ಹೆಚ್ಚಿನ ಹೊರೆಯಾಗುವುದು, ತಪ್ಪಿಸಲು ಸಾಧ್ಯವಿಲ್ಲವೇ ;

(ಊ) ಕೂಡಲೇ ಆದೇಶ ಹೊರಡಿಸಿ ಗ್ರಾಮೀಣ ಜನರ ಬದುಕಿಗೆ ಸರ್ಕಾರ ಆಸರೆಯಾಗುವುದೇ ?

## ಪ್ರಾಥಮಿಕ ಮತ್ತು ಪ್ರೌಢ ಶಾಲಾ ಕಟ್ಟಡಗಳು ಶಿಥಿಲಗೊಂಡಿರುವುದು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ** (ವಿಧಾನಸಭೆಯಿಂದ ಚುನಾಯಿತರಾದವರು) –

೨೮೭ (೧೫೯೭) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಯ ಕಟ್ಟಡಗಳು ಶಿಥಿಲಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಮುನ್ನೆಚ್ಚರಿಕೆ ಕ್ರಮವಾಗಿ ವಿದ್ಯಾರ್ಥಿಗಳಿಗೆ ಪರ್ಯಾಯ ವ್ಯವಸ್ಥೆಯನ್ನು ಮಾಡಲು ಸರ್ಕಾರ ಯಾವ ಕ್ರಮ ಕೈಗೊಳ್ಳುವುದು ;

(ಇ) ಈ ರೀತಿ ಶಿಥಿಲಾವಸ್ಥೆಯಲ್ಲಿರುವ ಕಟ್ಟಡಗಳ ಸಂಖ್ಯೆ ಎಷ್ಟು ; ಮತ್ತು ಅವು ಯಾವುವು ; ಶಿಥಿಲಗೊಂಡ ಈ ಕಟ್ಟಡವನ್ನು ಪುನರ್ ನಿರ್ಮಿಸಲು ಸರ್ಕಾರ ತಕ್ಷಣ ಕ್ರಮ ಕೈಗೊಳ್ಳುವುದೇ ? (ವಿವರ ನೀಡುವುದು)

## ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದಲ್ಲಿ

## ಖಾಲಿ ಇರುವ ಹುದ್ದೆಗಳ ಭರ್ತಿ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೮೮ (೧೬೦೫) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕನ್ನಡ ಜಿಲ್ಲೆಯ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದಲ್ಲಿ ಜಿಲ್ಲಾ ಪಂಚಾಯತ್ ಅಡಿಯಲ್ಲಿ ಬರುವ ಗ್ರಾಮೀಣ ರಸ್ತೆ, ನೀರು ಪೂರೈಕೆ, ಕೆರೆ ನಿರ್ವಹಣೆ, ಕಿರು ಸೇತುವೆ, ಕಾಲು ಸೇತುವೆ, ಶಾಲಾ ಕಟ್ಟಡ ಮತ್ತು ಗ್ರಾಮ ಪಂಚಾಯತ್‌ನ ಕಾಮಗಾರಿಗಳಿಗೆ ತಾಂತ್ರಿಕ ನೆರವು ನೀಡಿ ಕಾಮಗಾರಿ ಪೂರ್ಣಗೊಳಿಸುವ ಹೊಣೆ ಹೊತ್ತ ಪಂಚಾಯತ್ ರಾಜ್ ಇಂಜಿನಿಯರಿಂಗ್ ಕಛೇರಿಯಲ್ಲಿ ಬಹಳಷ್ಟು ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ ; (ವಿವರ ನೀಡುವುದು)

(ಆ) ಅಭಿವೃದ್ಧಿ ದೃಷ್ಟಿಯಿಂದ ಸದರಿ ಹುದ್ದೆಗಳನ್ನು ತುಂಬಲು ಸರ್ಕಾರ ಕೂಡಲೇ ಕ್ರಮ ಕೈಗೊಳ್ಳುವುದೇ ? (ವಿವರ ನೀಡುವುದು)

## ಅತಿಥಿ ಉಪನ್ಯಾಸಕರ ಗೌರವಧನ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) –**

೨೮೯ (೧೬೩೨) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ಸಂಖ್ಯೆ ಎಷ್ಟು ;

(ಆ) ಸದರಿ ಅತಿಥಿ ಉಪನ್ಯಾಸಕರಿಗೆ ತಲಾ ಮಾಸಿಕ ಎಷ್ಟು ಗೌರವಧನ ನೀಡಲಾಗುತ್ತಿದೆ ;

(ಇ) ಈ ಉಪನ್ಯಾಸಕರಿಗೆ ಗೌರವಧನ ಬಾಕಿ ನೀಡಬೇಕಾಗಿದೆಯೇ ; ಹಾಗಾದರೆ, ಯಾವ ಅವಧಿಯ, ಎಷ್ಟು ಮೊತ್ತವನ್ನು ಬಾಕಿ ನೀಡಬೇಕಾಗಿದೆ ; (ವಿವರ ನೀಡುವುದು)

(ಈ) ಸದರಿ ಅತಿಥಿ ಉಪನ್ಯಾಸಕರಿಗೆ ಗೌರವಧನವನ್ನು ಪರಷ್ಕರಣೆ ಮಾಡಲು ಸರ್ಕಾರ ಚಿಂತಿಸುವುದೇ ; ಹಾಗಾದರೆ, ಪರಿಷ್ಕರಣೆಯ ಮಾನದಂಡಗಳೇನು ? (ವಿವರ ನೀಡುವುದು)

## ಕಲಾವಿದರಿಗೆ ನೀಡುತ್ತಿರುವ ಮಾಸಾಶನ

**ಶ್ರೀ ವೀರಕುಮಾರ್ ಅಪ್ಪಾಸೊ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೯೦ (೧೫೭೦) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾಂ ಜಿಲ್ಲೆಯ ಎಷ್ಟು ಹಿರಿಯ ಕಲಾವಿದರಿಗೆ ಮಾಸಾಶನವನ್ನು ನೀಡಲಾಗುತ್ತಿದೆ ;

(ಆ) ಕಳೆದ ಎರಡು ವರ್ಷಗಳಿಂದ ಕಲಾವಿದರ ಮಾಸಾಶನಕ್ಕಾಗಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ವಿಲೇವಾರಿಯಾಗಿರುವ ಮತ್ತು ಬಾಕಿ ಉಳಿದಿರುವ ಅರ್ಜಿಗಳ ಸಂಖ್ಯೆ ಎಷ್ಟು ;

(ಇ) ಹಾಲಿ ನೀಡುತ್ತಿರುವ ಮಾಸಾಶನವನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಎಷ್ಟು ಪ್ರಮಾಣದಲ್ಲಿ ಹೆಚ್ಚಿಸಲಾಗುವುದು ಹಾಗೂ ಹೆಚ್ಚಳವನ್ನು ಎಂದಿನಿಂದ ಜಾರಿಗೆ ತರಲಾಗುವುದು ?

## ನದಿ ನೀರನ್ನು ನೇರ ಕುಡಿಯಲು ಬಳಸುವ ಗ್ರಾಮ ಪಂಚಾಯತ್‌ಗಳು

**ಶ್ರೀ ಕೆ. ಪ್ರತಾಪಚಂದ್ರಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೯೧ (೧೫೮೧) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ನದಿ ನೀರನ್ನು ನೇರವಾಗಿ ಕುಡಿಯುವ ನೀರಿನ ಟ್ಯಾಂಕುಗಳಿಗೆ ಪೂರೈಸುವುದರ ಮೂಲಕ ಗ್ರಾಮದ ಜನತೆಗೆ ಸರಬರಾಜು ಮಾಡುವ ಗ್ರಾಮ ಪಂಚಾಯತ್‌ಗಳು ಯಾವುವು ? (ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಜಿಲ್ಲೆಗಳಲ್ಲಿ ನದಿ ನೀರನ್ನು ಶುದ್ಧೀಕರಿಸಿ ಕುಡಿಯುವ ನೀರಿನ ಟ್ಯಾಂಕುಗಳಿಗೆ ಪೂರೈಸುವುದರ ಮೂಲಕ ಸರಬರಾಜು ಮಾಡುವ ಗ್ರಾಮ ಪಂಚಾಯತ್‌ಗಳು ಯಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಈ ಜಿಲ್ಲೆಗಳಲ್ಲಿ ನದಿ ನೀರನ್ನು ನೇರವಾಗಿ ಕುಡಿಯಲು ಬಳಸುತ್ತಿರುವ ಗ್ರಾಮ ಪಂಚಾಯತ್‌ಗಳಿಗೆ ನದಿ ನೀರನ್ನು ಶುದ್ಧೀಕರಿಸಿ ಬಳಸಲು ಯೋಜನೆ ರೂಪಿಸಲಾಗುವುದೇ ; ಇಲ್ಲವಾದಲ್ಲಿ, ಕಾರಣವೇನು ?

## ಸಿನಿಮಾ ಕಲಾವಿದರುಗಳ ಕಲ್ಯಾಣ ಕಾರ್ಯಕ್ರಮಗಳು

**ಡಾ॥ ಜೈಮಾಲಾ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) –**

೯೭೨ (೧೬೦೨) ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಿನಿಮಾ ಕಲಾವಿದರ ನೆರವಿಗಾಗಿ ಸರ್ಕಾರ ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು ; (ವಿವರಗಳನ್ನು ನೀಡುವುದು)

(ಆ) ಅಶಕ್ತ ಕಲಾವಿದರುಗಳಿಗೆ ಸಹಾಯಕವಾಗುವ ನಿಟ್ಟಿನಲ್ಲಿ ಇಲಾಖೆಯ ಕಾರ್ಯಕ್ರಮಗಳೇನು ; ಈಗಾಗಲೇ ಸ್ಥಾಪಿತವಾದ ಕಲಾವಿದರ ಕಲ್ಯಾಣ ನಿಧಿಯಲ್ಲಿ ಇಲ್ಲಿಯವರೆವಿಗೆ ಎಷ್ಟು ಜನಕ್ಕೆ ಸಹಾಯಧನ ನೀಡಲಾಗಿದೆ ;

(ಇ) ಕನ್ನಡ ಚಲನಚಿತ್ರಗಳಿಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಿಂದ ನಿರ್ಮಿಸುವ ವಾಣಿಜ್ಯ ಸಂಕೀರ್ಣಗಳಲ್ಲಿ ಹೆಚ್ಚಿನ ಚಲನಚಿತ್ರ ಮಂದಿರಗಳನ್ನು ನಿರ್ಮಿಸಲು ಸರ್ಕಾರವು ಯೋಚಿಸಿದೆಯೇ ;

## ಗ್ರಾಮ ಪಂಚಾಯಿತಿಗಳಲ್ಲಿ ತೆರಿಗೆ ಪರಿಷ್ಕರಣೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೯೩ (೧೫೫೭) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎಲ್ಲಾ ಗ್ರಾಮ ಪಂಚಾಯಿತಿಗಳು ಪ್ರತಿ ೪ ವರ್ಷಕ್ಕೊಮ್ಮೆ ತೆರಿಗೆ ಪರಿಷ್ಕರಣೆ ಮಾಡುತ್ತಿವೆಯೇ ;

(ಆ) ೧೯೯೩ರಿಂದ ೨೦೧೪ರವರೆಗೆ ಪ್ರತಿ ನಾಲ್ಕು ವರ್ಷಕ್ಕೊಮ್ಮೆ ತೆರಿಗೆ ಪರಿಷ್ಕರಣೆಯನ್ನು ಮಾಡದ ಗ್ರಾಮ ಪಂಚಾಯಿತಿಗಳಾವುವು ; (ಜಿಲ್ಲಾವಾರು, ತಾಲ್ಲೂಕುವಾರು, ಪಂಚಾಯಿತಿವಾರು ವಿವರ ನೀಡುವುದು)

(ಇ) ನಾಲ್ಕು ವರ್ಷಕ್ಕೊಮ್ಮೆ ತೆರಿಗೆ ಪರಿಷ್ಕರಣೆ ಮಾಡಲು ಗ್ರಾಮ ಪಂಚಾಯಿತಿಗಳಿಗಿರುವ ತೊಂದರೆಯೇನು ;

(ಈ) ತೆರಿಗೆ ಪರಿಷ್ಕರಣೆ ಮಾಡದಿರುವ ಪಂಚಾಯಿತಿಗಳ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ? (ಪೂರ್ಣ ವಿವರ ನೀಡುವುದು)

## ಗುಂಡಾಲ್ ಜಲಾಶಯವನ್ನು ಪ್ರವಾಸಿ ಸ್ಥಳವಾಗಿ ಅಭಿವೃದ್ಧಿಪಡಿಸುವುದು

**ಶ್ರೀ ಎಸ್. ನಾಗರಾಜ್ (ಸಂದೇಶ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೯೪ (೧೬೨೧) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗುಂಡಾಲ್ ಜಲಾಶಯ ಪ್ರದೇಶವನ್ನು ಪ್ರವಾಸಿ ತಾಣವಾಗಿ ಅಭಿವೃದ್ಧಿಪಡಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ;

(ಆ) ಈ ಪ್ರದೇಶವು ರಮಣೀಯ ಪ್ರದೇಶವಾಗಿದ್ದು, ಅನೇಕ ಚಲನಚಿತ್ರಗಳ ಚಿತ್ರೀಕರಣ ಇಲ್ಲಿ ನಡೆದಿದ್ದು, ವಾರಾಂತ್ಯ ಅನೇಕ ಪ್ರವಾಸಿಗರು ಇಲ್ಲಿಗೆ ಭೇಟಿ ನೀಡುವುದರಿಂದ ಈ ಪ್ರದೇಶವನ್ನು ಪ್ರವಾಸಿ ಸ್ಥಳವಾಗಿ ಅಭಿವೃದ್ಧಿಪಡಿಸಲಾಗುವುದೇ;

(ಇ) ಈ ಪ್ರದೇಶದಲ್ಲಿ ಮೂಲಸೌಲಭ್ಯಗಳ ಅಭಿವೃದ್ಧಿಗೆ ನೀರಾವರಿ ಇಲಾಖೆ, ಅರಣ್ಯ ಇಲಾಖೆಯ ಜೊತೆ ಚರ್ಚಿಸಿ ಕ್ರಮ ತೆಗೆದುಕೊಳ್ಳಲಾಗುವುದೇ ; ಇದುವರೆಗೆ ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು ?

## ಹೊಸ ಪತ್ರಿಕೆಗಳ ನೂತನ ನೀತಿಯ ಬದಲಾವಣೆ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೯೫ (೧೬೧೫) ಮೂಲಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೊಸ ಪತ್ರಿಕೆಗಳಿಗೆ ನೂತನ ನೀತಿಯಲ್ಲಿ ಸರ್ಕಾರದ ಮಾಧ್ಯಮ ಪಟ್ಟಿಗೆ ಸೇರಲು ಈ ಹಿಂದೆ ೧ ವರ್ಷ ನಿರಂತರವಾಗಿ ಪ್ರಕಟವಾಗಿದ್ದರೆ ಸಾಕು ಎಂಬುದರ ಬದಲಾಗಿ ೨ ವರ್ಷ ನಿರಂತರ ಪ್ರಕಟಣೆ ಕಡ್ಡಾಯಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸಣ್ಣ ಪತ್ರಿಕೆಗಳಿಗೆ ಇದು ಮಾರಕವಾಗುತ್ತಿಲ್ಲವೇ ;

(ಇ) ಈ ಅಂಶವನ್ನು ಬದಲಾಯಿಸಲು ಸರ್ಕಾರಕ್ಕಿರುವ ತೊಂದರೆಗಳೇನು ? (ವಿವರದ ಪೂರ್ಣ ಮಾಹಿತಿ ನೀಡುವುದು)

## ಶಿವಯೋಗ ಮಂದಿರದಲ್ಲಿ ಹೊನಲು–ಬೆಳಕು ಯೋಜನೆ

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) –**

೨೯೬ (೧೫೬೧) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಾಗಲಕೋಟೆ ಜಿಲ್ಲೆ, ಬಾದಾಮಿ ತಾಲ್ಲೂಕಿನ ಶಿವಯೋಗ ಮಂದಿರದಲ್ಲಿ ಸಂಗೀತ ಕಾರಂಜಿ, ಹೊನಲು_ಬೆಳಕು ಯೋಜನೆ ಕೈಗೊಳ್ಳುವ ಸಲುವಾಗಿ ಬಾಗಲಕೋಟೆ ಜಿಲ್ಲಾಧಿಕಾರಿಗಳು ಪ್ರಸ್ತಾವನೆಯನ್ನು ಕಳುಹಿಸಿದ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಾಗಲಕೋಟೆ ಜಿಲ್ಲೆ ಉಸ್ತುವಾರಿ ಸಚಿವರೂ ಸಹ ಇಲ್ಲಿ ಸಂಗೀತ ಕಾರಂಜಿ ಹೊನಲು–ಬೆಳಕು ಯೋಜನೆಯನ್ನು ಕೈಗೊಳ್ಳಬೇಕು ಎಂದು ಕೋರಿದ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಿಂದಿನ ಮುಖ್ಯಮಂತ್ರಿಗಳು ಈ ಕೆಲಸ ತೆಗೆದುಕೊಳ್ಳುವುದಾಗಿ ಆಶ್ವಾಸನೆ ನೀಡಿದ ಸಂಗತಿ ನಿಜವೇ ;

(ಈ) ಹಾಗಿದ್ದಲ್ಲಿ, ಈ ಕೆಲಸವನ್ನು ಯಾವಾಗ ತೆಗೆದುಕೊಳ್ಳಲಾಗುವುದು ?

## ಕಾಲೇಜುಗಳಲ್ಲಿ ಲ್ಯಾಬ್‌ಗಳ ಕೊರತೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೨೯೭ (೧೬೦೪) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ, ಅನುದಾನಿತ ಹಾಗೂ ಅನುದಾನ ರಹಿತ ಖಾಸಗಿ ಕಾಲೇಜುಗಳಲ್ಲಿ ಲ್ಯಾಬ್‌ಗಳ ಅಗತ್ಯವಿದ್ದೂ ಲ್ಯಾಬ್‌ಗಳಿಲ್ಲದ ಕಾಲೇಜುಗಳ ಸಂಖ್ಯೆ ಎಷ್ಟು ;

(ಆ) ಶೌಚಾಲಯಗಳಿಲ್ಲದ ಕಾಲೇಜುಗಳ ಸಂಖ್ಯೆ ಎಷ್ಟು ; ಯಾವುವು ?

## ಸಾಂಪ್ರದಾಯಿಕ ಕೋರ್ಸ್‌ಗಳ ಉತ್ತೇಜನ

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) –**

೨೯೮ (೧೫೭೬) ಉನ್ನತ ಶಿಕ್ಷಣ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಾಂಪ್ರದಾಯಿಕ ಪದವಿ ಹಾಗೂ ಸ್ನಾತಕೋತ್ತರ ಪದವಿ (ಉದಾ: ಬಿ.ಎ., ಬಿ.ಎಸ್‌ಸಿ., ಎಂ.ಎ., ಎಂ.ಎಸ್‌ಸಿ.,) ಕೋರ್ಸ್‌ಗಳಿಗೆ ಬೇಡಿಕೆ ಇಲ್ಲದಂತಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ :

(ಆ) ಇದರಿಂದಾಗಿ ನಂತರದ ದಿನಗಳಲ್ಲಿ ಕಾಲೇಜುಗಳಲ್ಲಿ ಕಲಾ ವಿಜ್ಞಾನದ ಬೋಧನೆಗೆ ಶಿಕ್ಷಕರೇ ಇಲ್ಲದಂತಾಗುವ ವಾತಾವರಣ ನಿರ್ಮಾಣವಾಗಿದೆಯೇ ; ಇದಕ್ಕೆ ಕಾರಣಗಳೇನು ; ಈ ನಿಟ್ಟಿನಲ್ಲಿ ಸರ್ಕಾರ ಯಾವ ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಿದೆ ;

(ಇ) ಇದಕ್ಕಾಗಿ ವಿಶ್ವವಿದ್ಯಾಲಯ ಕಾಲೇಜುಗಳ ಪಠ್ಯಕ್ರಮಗಳನ್ನು ಬದಲಾವಣೆ ಮಾಡಲು ಸರ್ಕಾರ ಬಯಸಿದೆಯೇ ; ಯಾವ ಯಾವ ಕೋರ್ಸ್‌ಗಳ ಪಠ್ಯಕ್ರಮಗಳನ್ನು ಬದಲಾವಣೆ ಮಾಡಲು ಉದ್ದೇಶಿಸಿದೆ ; (ಕಲಾ,ವಿಜ್ಞಾನ, ಇಂಜಿನಿಯರಿಂಗ್ ಕೋರ್ಸ್‌ವಾರು ವಿವರಗಳನ್ನು ನೀಡುವುದು)

(ಈ) ಈ ನಿಯಮಗಳನ್ನು ಖಾಸಗಿ ವಿಶ್ವವಿದ್ಯಾಲಯಗಳು ಸೇರಿ ಮಾನ್ಯತೆ ಪಡೆದ ಕಾಲೇಜುಗಳಿಗೂ ಅನ್ವಯಗೊಳಿಸಲಾಗುವುದೇ ;

(ಉ) ಸಾಂಪ್ರದಾಯಿಕ ಕೋರ್ಸ್‌ಗಳ ಉತ್ತೇಜನಕ್ಕೆ ಯಾವ ಕ್ರಮ ಕೈಗೊಳ್ಳಲಾಗಿದೆ ; ಇದೇ ನಿರಾಸಕ್ತಿ ಉಂಟಾದಲ್ಲಿ ಮುಂಬರುವ ದಿನಗಳಲ್ಲಿ ಈ ಕೋರ್ಸ್‌ಗಳಿಗೆ ಪ್ರವೇಶ ಪಡೆಯಲು ಬರುವವರ ಸಂಖ್ಯೆ ಕಡಿಮೆ ಆಗುವ ಬಗ್ಗೆ ಆತಂಕವಿಲ್ಲವೆ ?

## ಡಿಪ್ಲೊಮಾ, ಪದವಿ ಕಾಲೇಜುಗಳು

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೯೯ (೧೫೮೮) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗುಲ್ಬರ್ಗಾ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಇರುವ ಡಿಪ್ಲೊಮಾ ಮತ್ತು ಪದವಿ ಕಾಲೇಜುಗಳ ಸಂಖ್ಯೆ ಎಷ್ಟು ;

(ಆ) ಈ ಕಾಲೇಜುಗಳಲ್ಲಿ ಸ್ವಂತ ಕಟ್ಟಡ ಹಾಗೂ ಮೂಲಭೂತ ಸೌಕರ್ಯ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಸೌಲಭ್ಯಗಳ ಕೊರತೆಯಿಂದ ವಿದ್ಯಾರ್ಥಿಗಳು ಬೇರೆ ಜಿಲ್ಲೆಗಳಿಗೆ ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಸ್ತ್ರೀಶಕ್ತಿ ಸಂಘಗಳು

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) –**

೩೦೦ (೧೫೫೦) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಯಾವ ಯಾವ ಇಲಾಖೆಗಳಲ್ಲಿ ಸ್ತ್ರೀಶಕ್ತಿ ಸಂಘಗಳು ರಚನೆಯಾಗಿರುತ್ತವೆ ಹಾಗೂ ಅಂತಹ ಇಲಾಖೆಗಳಲ್ಲಿ ಇವುಗಳ ಕಾರ್ಯ ಚಟುವಟಿಕೆಗಳೇನು ; (ವಿವರಗಳೊಂದಿಗೆ)

(ಆ) ಸ್ತ್ರೀಶಕ್ತಿ ಸಂಘಗಳನ್ನು ಒಂದೇ ಸೂರಿನಡಿಯಲ್ಲಿ (ಒಂದೇ ಇಲಾಖೆಯಡಿ) ತರುವ ಪ್ರಸ್ತಾವನೆ ಇದೆಯೇ ? (ಹಾಗಿದ್ದಲ್ಲಿ, ವಿವರ ನೀಡುವುದು)

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಪಿ8, ಕಾ.ಸೂ. 393, ಪ್ರತಿಗಳು 1000